



ಅರುಣ ಪಿ. ಭಟ್ಟ

## ವಾರಭವಿಷ್ಯ: 27.11.2025ರಿಂದ 03.12.2025ರವರೆಗೆ





ಕೆಲವರ ಮಾತನ್ನು ನಂಬಿ ನಷ್ಟದ ವ್ಯವಹಾರದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ನಿಮ್ಮ ಬಹುಕಾಲದ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ. ಈ ವಾರ ಮೋಜು ಮಸ್ತಿ ಹೆಚ್ಚಾಗುವ ಸಾಧ್ಯತೆ ಇದೆ. ಆದಾಯ ಹೆಚ್ಚುವ ಅವಕಾಶ ವಿಪುಲವಾಗಿದೆ. ಕಾರ್ಯ ನಿರ್ವಹಿಸುವವರಿಗೆ ಪ್ರಗತಿಗೆ ಅತ್ಯುತ್ತಮ ಅವಕಾಶಗಳಿವೆ. ಶುಭದಿನ: 02. ವಿಷ್ಣು ಸಹಸ್ರನಾಮ ಪಠಿಸಿರಿ.

---




ನಿರುದ್ಯೋಗಿಗಳಿಗೆ ಉದ್ಯೋಗದ ಅವಕಾಶಗಳು ಕಂಡುಬರಲಿವೆ. ಹಣಕಾಸು ವ್ಯವಹಾರಗಳು ಯೋಜಿತವಾಗಿ ನಡೆಯಲಿವೆ. ಕಷ್ಟದ ಕಾರ್ಯಗಳನ್ನು ಸಹ ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ. ಅವಿವಾಹಿತರಿಗೆ ವಿವಾಹದ ಯೋಗ ಸಾಧ್ಯತೆ ಕಾಣಬಹುದಾಗಿದೆ. ಪ್ರೀತಿಪಾತ್ರರಿಗೆ ಉಡುಗೊರೆ ನೀಡುವ ಸಾಧ್ಯತೆ. ಶುಭದಿನ: 30. ಹನುಮಾನ್ ಚಾಲೀಸ್ ಪಠಿಸಿರಿ.

---




ಆತ್ಮೀಯರ ಜೊತೆ ವಿವಾದಗಳು ಹೆಚ್ಚಾಗಬಹುದು. ಭೂ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಕೆಲಸದ ವಿಷಯದಲ್ಲಿ ಸಮಸ್ಯೆಗಳು ಉದ್ಭವವಾಗಲಿದೆ ಆದಷ್ಟು ಸಮಸ್ಯೆಗಳನ್ನು ಆ ಕ್ಷಣದಲ್ಲೇ ಬಗೆಹರಿಸಲು ಪ್ರಯತ್ನಿಸಿ. ಒತ್ತಡದ ವಿಚಾರಗಳಿಂದ ಖಿನ್ನತೆ ಆವರಿಸಲಿದೆ. ಒಗ್ಗಟ್ಟಾಗಿ ಕೆಲಸ ಮಾಡುವುದಕ್ಕೆ ಪ್ರೇರಣೆ ಸಿಗುತ್ತದೆ. ಶುಭದಿನ: 02. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---





ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತ ಕಾರ್ಯಶೈಲಿ ಕಂಡುಬರುತ್ತದೆ. ಲೇವಾದೇವಿ ವ್ಯವಹಾರಗಳಿಂದ ದೂರವಿರುವುದು ಲೇಸು. ಕುಟುಂಬದ ಜೊತೆಗೆ ಹೆಚ್ಚಿನ ಕಾಲ ಕಳೆಯಲಿದ್ದೀರಿ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು. ಪ್ರೀತಿ ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರವಾದ ಅನುಭವವನ್ನು ಪಡೆಯಲಿದ್ದೀರಿ. ಶುಭದಿನ: 03. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---





ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳು ಹೆಚ್ಚಾಗಲಿದ್ದಾರೆ. ನಿಮ್ಮ ಕಾರ್ಯಗಳಿಗೆ ತೊಂದರೆ ನೀಡುವ ವ್ಯಕ್ತಿಗಳನ್ನು ಗುರುತಿಸಿ ಆದಷ್ಟು ದೂರವಿಡುವುದು ಒಳ್ಳೆಯದು. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ಪತ್ನಿಯ ವಿಚಾರಗಳಿಗೆ ಸಹಮತ ನೀಡಿ. ಆರ್ಥಿಕ ವಿಷಯದಲ್ಲಿ ಸಂತೃಪ್ತಿಯ ಭಾವನೆ ಮೂಡಲಿದೆ. ಶುಭದಿನ: 01. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---




ಮುಖ್ಯ ಕೆಲಸವನ್ನು ಮರೆತುಬಿಡಬಹುದು, ಆದಷ್ಟು ಮುತುವರ್ಜಿವಹಿಸಿ. ಹೊಸ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ. ಆದಾಯ ಹೆಚ್ಚಳವಾಗಿದ್ದರೂ ಸಹ ಖರ್ಚುಗಳು ವಿಪರೀತವಾಗಲಿವೆ. ಅನಪೇಕ್ಷಿತ ಖರ್ಚುಗಳಿಗೆ ಕಡಿವಾಣ ಹಾಕುವುದು ಒಳ್ಳೆಯದು. ಪತ್ನಿಯೊಡನೆ ಉತ್ತಮ ಬಾಂಧವ್ಯ ಇರಲಿದೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಶುಭದಿನ: 03. ಆದಿತ್ಯ ಹೃದಯ ಪಠಿಸಿರಿ.

---





ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷ್ಯ ಹೆಚ್ಚಾಗಬಹುದು. ಹಣಕಾಸಿನ ಕುಂದುಕೊರತೆ ಕಾಡಲಿದೆ. ದೈವ ಸಂಕಲ್ಪದ ಮೊರೆಹೋಗುವ ಸಾಧ್ಯತೆ ಕಂಡು ಬರಲಿದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಶುಭದಿನ: 30. ಚಂಡಿ ಪಾರಾಯಣ ಮಾಡಿರಿ.

---





ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ನಿರೀಕ್ಷೆಗಳಂತೆ ಆರ್ಥಿಕವಾಗಿ ಪ್ರಬಲರಾಗುವ ಸಾಧ್ಯತೆ ಕಂಡುಬರುತ್ತದೆ. ವಿದ್ಯಾರ್ಥಿಗಳಿಗೆ ಉತ್ತಮ ನಿರೀಕ್ಷೆಗಳು ಮೂಡಲಿವೆ. ಸ್ವಾವಲಂಬನೆಯ ಚಿಂತನೆ ಮೂರ್ತರೂಪ ಪಡೆಯಲಿದೆ. ಶುಭದಿನ: 02. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.

---





ಮಾನಸಿಕ ಕ್ಲೇಶಗಳು ನಿಮ್ಮ ಅಭಿವೃದ್ಧಿಗೆ ಮಾರಕವಾಗಬಹುದು. ಕುಟುಂಬದಲ್ಲಿ ಅಶಾಂತಿ ಗೋಚರವಾಗಲಿದೆ. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ: 29. ಕಾಲಭೈರವನ ಸೇವೆ ಮಾಡಿರಿ.

---





ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆ ಮುಖ್ಯವಾದ ಚರ್ಚೆ ನಡೆಸಲಿದ್ದೀರಿ. ಸಂಗಾತಿ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯೋಗ ಸ್ಥಳದಲ್ಲಿ ನಿರೀಕ್ಷಿತ ಯಶಸ್ಸು ಸಾಧಿಸಲಿದ್ದೀರಿ. ಶುಭದಿನ: 28. ಸೌಂದರ್ಯ ಲಹರಿ ಪಠಿಸಿರಿ.

---




ಅಪರಿಚಿತರಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ವಾಹನದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ಪತ್ನಿಯೊಡನೆ ಕೋಪ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ. ನಿಮ್ಮೆಲ್ಲ ಕೆಲಸಗಳಿಗೆ ತಾಳ್ಮೆ ಅತ್ಯವಶ್ಯಕ. ಹಣಕಾಸಿನ ವಿಷಯದಲ್ಲಿ ಉತ್ತಮ ರೀತಿಯ ವ್ಯವಹಾರ ಕಾಣಬಹುದು. ದಿಢೀರ್ ಆಗಿ ಹಣಕಾಸಿನ ವೆಚ್ಚ ಹೆಚ್ಚಾಗಲಿದೆ. ಶುಭದಿನ: 02. ಕನಕಧಾರಾ ಸ್ತೋತ್ರ ಪಠಿಸಿರಿ.

---




ಕೆಲಸಕಾರ್ಯಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ. ಕೆಲಸಗಳಿಗಾಗಿ ಪರಸ್ಥಳ ವಾಸ ಅನುಭವಿಸಬೇಕಾದ ಸಂದರ್ಭ ಬರಬಹುದು. ನೀವು ಮಾಡಿದ ಒಳ್ಳೆ ಕೆಲಸಕ್ಕೆ ಮೆಚ್ಚುಗೆ ಲಭಿಸಲಿದೆ. ಶುಭದಿನ: 01. ಚಂಡಿ ಪಾರಾಯಣ ಮಾಡಿರಿ.